ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**

ಸಂಖ್ಯೆ : ಬೆಂಅಪ್ರಾ/ನಯೋಸ/PRL-50/2021-22/ 2263 /2022-23. ದಿನಾಂಕ :
No. Computer No. 163325 Date : 17/12/2022

# ಕಾರ್ಯಾದೇಶ

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕಂಬೀಪುರ ಗ್ರಾಮದ ಸರ್ವೆ ನಂ. 253/2 ರಲ್ಲಿನ 1ಎಕರೆ-38ಗುಂಟೆ ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯನ್ನು ಅರ್ಜಿದಾರರಾದ ಶ್ರೀ. ಪ್ರಸನ್ನಕುಮಾರ್ ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:
1. ಅರ್ಜಿ ದಿನಾಂಕ 21.02.2022.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 2.3.2 / 2022, ದಿನಾಂಕ 22.06.2022.
3. ಈ ಕಛೇರಿಯ ಪತ್ರ ಸಂಖ್ಯೆಬೆಂಅಪ್ರಾ/ನಯೋಸ/PRL-50/2021-22/973/2022-23, ದಿನಾಂಕ 29.07.2022.
4. ಪ್ರಾಧಿಕಾರಕ್ಕೆ ಚಲನ್ ನಂ. GN22071378 ರ ಮೂಲಕ ದಿನಾಂಕ 29.07.2022.
5. ಈ ಕಛೇರಿ ಅನೌಪಚಾರಿಕ ಟಿಪ್ಪಣಿ ಸಂಖ್ಯೆ ಬೆಂಅಪ್ರಾ/ನಯೋಸ/PRL-50/2021-22/1337/2022-23, ದಿನಾಂಕ 08.09.2022.
6. ಅಧಿಕ ಜಿಲ್ಲಾ ನೊಂದಣಾದಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಅಪ್ರಾ ರವರ ಕಛೇರಿಯಲ್ಲಿ ನೊಂದಾಯಿಸಲ್ಪಟ್ಟ ಪರಿತ್ಯಾಜನಾ ಪತ್ರ ಸಂಖ್ಯೆ BDA-1-02498-2022-23, ಸಿ.ಡಿ. ನಂ. BDAD1189, ದಿನಾಂಕ 27.10.2022.

ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕಂಬೀಪುರ ಗ್ರಾಮದ ಸರ್ವೆ ನಂ. 253/2 ರಲ್ಲಿನ 1ಎಕರೆ-38ಗುಂಟೆ ವಿಸ್ತೀರ್ಣದ ಜಮೀನಿಗೆ ವಸತಿ ಬಡಾವಣೆ ನಕ್ಷೆಯನ್ನು ಅರ್ಜಿದಾರರಾದ ಶ್ರೀ.ಪ್ರಸನ್ನಕುಮಾರ್ ರವರ ಪರವಾಗಿ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಉಲ್ಲೇಖ [2] ರಂತೆ ದಿನಾಂಕ 22.06.2022ರಂದು ಜರುಗಿದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ 2.3.2 / 2022 ರಲ್ಲಿ ಮಂಡಿಸಲಾಗಿತ್ತು. ಚರ್ಚೆಯ ನಂತರ ಪ್ರಶ್ನಿತ ಜಮೀನಿನವರೆಗೆ 11.8 ಮೀ ಅಗಲದ ಹಾಲಿ ರಸ್ತೆ ಇದ್ದು, ಅರ್ಜಿದಾರರ ಜಮೀನಿನ ಮುಂಭಾಗದಲ್ಲಿ 8.0ಮೀ ಅಗಲದ ರಸ್ತೆಯಿದ್ದು, ಸದರಿ ರಸ್ತೆಯನ್ನು 12.0ಮೀ ಅಗಲಕ್ಕೆ ವಿಸ್ತರಿಸಲು ಬೇಕಾಗಿರುವ ಅಗತ್ಯ ಜಾಗವನ್ನು ಕಾಯ್ದಿರಿಸಿ, ನಕ್ಷೆಯನ್ನು ವಲಯ ನಿಯಮಾವಳಿಯ ಅಧ್ಯಾಯ 6.1 ರ ರೀತ್ಯಾ ತಯಾರಿಸಿ ಸಲ್ಲಿಸಿರುವುದರಿಂದ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕಂಬೀಪುರ ಗ್ರಾಮದ ಸರ್ವೆ ನಂ. 253/2 ರಲ್ಲಿನ 1ಎಕರೆ-38ಗುಂಟೆ ವಿಸ್ತೀರ್ಣದ ಜಮೀನಿಗೆ ವಸತಿ ಬಡಾವಣೆ ನಕ್ಷೆಯನ್ನು ಕೆಟಿಸಿಪಿ ಕಾಯ್ದೆ ಕಲಂ 17 (2-A) ಮತ್ತು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕಂಬೀಪುರ ಗ್ರಾಮದ ಸರ್ವೆ ನಂ. 253/2 ರಲ್ಲಿನ 1ಎಕರೆ-38ಗುಂಟೆ ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯನ್ನು ಅರ್ಜಿದಾರರಾದ ಶ್ರೀ.ಪ್ರಸನ್ನಕುಮಾರ್ ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

ಕಾಯ್ದೆ 1976 ರ ಕಲಂ 32 ಅಡಿಯಲ್ಲಿ ತಾತ್ಕಾಲಿಕ ಬಡಾವಣೆ ನಕ್ಷೆಯನ್ನು 'demarcation and development' ಉದ್ದೇಶಕ್ಕೆ ಸಾಮಾನ್ಯ ಷರತ್ತುಗಳಿಗೊಳಪಡಿಸಿ, ಅನುಮೋದಿಸಲು ತೀರ್ಮಾನಿಸಿ, ನಿಯಮಾನುಸಾರ ಮುಂದಿನ ಕ್ರಮವಹಿಸುವ ಅಧಿಕಾರವನ್ನು ಆಯುಕ್ತರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಯಿತು.

ನಗರ ಯೋಜನಾ ಸಮಿತಿ ಸಭೆಯ ತೀರ್ಮಾನದಂತೆ ವಸತಿ ಬಡಾವಣೆ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ [3] ರ ಪತ್ರದಲ್ಲಿ ವಿವಿಧ ಶುಲ್ಕಗಳ ಬಾಬ್ತು ₹. 13,47,970/- [₹. ಹದಿಮೂರು ಲಕ್ಷದ ನಲವತ್ತೇಳು ಸಾವಿರದ ಒಂಭೈನೂರ ಎಪ್ಪತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಲು ಅರ್ಜಿದಾರರಿಗೆ ತಿಳಿಸಲಾಗಿತ್ತು.

ಅರ್ಜಿದಾರರು ದಿನಾಂಕ 29.07.2022 ರಂದು ಉಲ್ಲೇಖ [4] ರಂತೆ ₹. 13,47,970/- [₹. ಹದಿಮೂರು ಲಕ್ಷದ ನಲವತ್ತೇಳು ಸಾವಿರದ ಒಂಭೈನೂರ ಎಪ್ಪತ್ತು ಮಾತ್ರ] ಅನ್ನು ಕೆನರಾ ಬ್ಯಾಂಕ್‌ನಲ್ಲಿ ಪ್ರಾಧಿಕಾರದ ಚಲನ್ ನಂ. GN22071378 ರ ಮೂಲಕ ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ. ಸದರಿ ಮೊತ್ತವು ಪ್ರಾಧಿಕಾರದ ಲೆಕ್ಕ ಶೀರ್ಷಿಕೆಯಲ್ಲಿ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 17.11.2022 ರಂದು ದೃಢೀಕರಿಸಿರುತ್ತಾರೆ.

ತಾತ್ಕಾಲಿಕ ಕರಡು ವಸತಿ ಬಡಾವಣೆ ನಕ್ಷೆಯಲ್ಲಿನ ಉದ್ಯಾನವನ / ಬಯಲುಜಾಗ, ಪಬ್ಲಿಕ್ ಯುಟಿಲಿಟಿ, ಹಾಗೂ ರಸ್ತೆಗಾಗಿ ಕಾಯ್ದಿರಿಸಿರುವ ಪ್ರದೇಶಗಳನ್ನು ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಹಸ್ತಾಂತರಿಸಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರು [ದಕ್ಷಿಣ], ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಉಲ್ಲೇಖ [5] ರಲ್ಲಿ ತಿಳಿಸಲಾಗಿತ್ತು.

ಕಾರ್ಯಪಾಲಕ ಅಭಿಯಂತರರು [ದಕ್ಷಿಣ], ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರು ಉಲ್ಲೇಖ [6] ರಂತೆ ತಾತ್ಕಾಲಿಕ ಕರಡು ವಸತಿ ಬಡಾವಣೆ ನಕ್ಷೆಯಲ್ಲಿನ ಉದ್ಯಾನವನ / ಬಯಲುಜಾಗ, Public Utilities, ಹಾಗೂ ರಸ್ತೆಗಾಗಿ ಕಾಯ್ದಿರಿಸಿರುವ ಪ್ರದೇಶಗಳನ್ನು ದಿನಾಂಕ 27.10.2022 ರಂದು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಿ ಕೊಂಡಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕಂಬೀಪುರ ಗ್ರಾಮದ ಸರ್ವೆ ನಂ. 253/2 ರಲ್ಲಿನ 1ಎಕರೆ-38ಗುಂಟೆ ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 [2-A] ರಡಿಯಲ್ಲಿ Demarcation & Development ಉದ್ದೇಶಕ್ಕಾಗಿ ಮಾತ್ರ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದಿಸಲಾಗಿದೆ.

| | |
|---|---|
| 1 | ರೇರಾ ಅಧಿನಿಯಮ 2016 ಹಾಗೂ ಸಂಬಂಧಿತ ಅಧಿನಿಯಮಗಳು 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ಯೋಜನೆಯನ್ನು ನೊಂದಣಿ ಮಾಡಿಸುವುದು. |

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕಂಬೀಪುರ ಗ್ರಾಮದ ಸರ್ವೆ ನಂ. 253/2 ರಲ್ಲಿನ 1ಎಕರೆ-38ಗುಂಟೆ ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯನ್ನು ಅರ್ಜಿದಾರರಾದ ಶ್ರೀ.ಪ್ರಸನ್ನಕುಮಾರ್ ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

| | |
|---|---|
| 2 | ಪ್ರಸ್ತಾವನೆಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಾಗಲೀ / ಲೋಕಾಯುಕ್ತದಲ್ಲಾಗಲೀ / ಯಾವುದೇ ವಿಚಾರಣಾ ಪ್ರಾಧಿಕಾರದಲ್ಲಾಗಲೀ ಪ್ರಕರಣ ದಾಖಲಾಗಿದ್ದಲ್ಲಿ ಅರ್ಜಿದಾರರೇ ಬಗೆಹರಿಸಿಕೊಳ್ಳತಕ್ಕದ್ದು. |
| 3 | ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯಂತೆ ವಿವಿಧ ಅಳತೆಯ ಒಟ್ಟು 37 ವಸತಿ ನಿವೇಶನಗಳಿದ್ದು (31 ವಿವಿಧ ಅಳತೆಯ ನಿವೇಶನಗಳು + 6 EWS ನಿವೇಶನಗಳು) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪೂರ್ವಾನುಮೋದನೆ ಇಲ್ಲದೆ ನಿವೇಶನಗಳ ಅಳತೆ ಹಾಗೂ ನಿವೇಶನಗಳ ಒಟ್ಟು ಸಂಖ್ಯೆಯನ್ನು ಅನುಮೋದಿತ ಬಡಾವಣೆ ನಕ್ಷೆಯಲ್ಲಿ ಬದಲಾಯಿಸತಕ್ಕದ್ದಲ್ಲ. ವಿನ್ಯಾಸದಲ್ಲಿ ಯಾವುದೇ ಬದಲಾವಣೆ ಮಾಡಿ ಮನೆ ಕಟ್ಟಿದಲ್ಲಿ ಅದಕ್ಕೆ ಅರ್ಜಿದಾರರೇ ಹೊಣೆಯಾಗಬೇಕಾಗುತ್ತದೆ. |
| 4 | ಅನುಮೋದಿತ ಬಡಾವಣೆ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು, ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬಡಾವಣೆಗಳನ್ನು ಮಾಡುವಂತಿಲ್ಲ. |
| 5 | ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೂ ಕುಡಿಯುವ ನೀರು, ತ್ಯಾಜ್ಯ ನೀರು, ವಿಲೇವಾರಿ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸತಕ್ಕದ್ದು ಹಾಗೂ ಉದ್ದೇಶಿತ ವಸತಿ ವಿನ್ಯಾಸದಲ್ಲಿ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ದಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿತೋರಿಸತಕ್ಕದ್ದು. |
| 6 | ಉದ್ಯಾನವನ ಮತ್ತು ಬಯಲುಜಾಗಗಳನ್ನು ಅನುಮೋದಿತ ಬಡಾವಣೆ ನಕ್ಷೆ ಪ್ರಕಾರ ಶೇ.100/- ರಷ್ಟು ನಿವೇಶನಗಳ ಬಿಡುಗಡೆಗೊಳಿಸುವ ಮೊದಲು Chain link Fencing ಮಾಡಿ ಅಳವಡಿಸುವುದು ಹಾಗೂ ಅಭಿವೃದ್ಧಿ ಪಡಿಸುವುದು. |
| 7 | ವಸತಿ ಬಡಾವಣೆ ನಕ್ಷೆಯಲ್ಲಿ ತೋರಿಸಿರುವ ರಸ್ತೆ ಅಗಲವನ್ನು ಯಾವುದೇ ಕಾರಣಕ್ಕೂ ಕಡಿಮೆ ಮಾಡಬಾರದು. |
| 8 | Buffer ಪ್ರದೇಶದಲ್ಲಿ ಗಿಡ-ಮರಗಳನ್ನು ಬೆಳಸತಕ್ಕದ್ದು |
| 9 | ಅರ್ಜಿದಾರರು ಉದ್ದೇಶಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಬಡಾವಣೆ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಕೆಟಿಸಿಪಿ ಕಾಯ್ದೆ ಕಲಂ 76 (O) ರಡಿಯಲ್ಲಿ ಅಧಿಕಾರವನ್ನು ಪ್ರಾಧಿಕಾರದ ಆಯುಕ್ತರು ಅಧಿಕಾರವುಳ್ಳರಾಗಿದ್ದು, ಅದರಂತೆ ಕ್ರಮ ಜರುಗಿಸಲಾಗುವುದು. |
| 10 | ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ತಪ್ಪು ದಾಖಲೆ ಅಥವಾ ಇನ್ನಿತರೆ ಪೋರ್ಜರಿ ದಾಖಲಾತಿಗಳನ್ನು ನೀಡಿರುವುದು ರುಜುವಾತಾದಲ್ಲಿ ಈಗ ನೀಡಿರುವ ಬಡಾವಣೆ ನಕ್ಷೆ ಅನುಮೋದನೆಯು ತನ್ನಿಂದತಾನೆ ರದ್ದಾಗುವುದೆಂದು ಭಾವಿಸತಕ್ಕದ್ದು. |
| 11 | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ದರಾಗಿರುವುದು. |
| 12 | ಪ್ರಸ್ತಾಪಿತ ವಿನ್ಯಾಸದಲ್ಲಿ ಘನ ತ್ಯಾಜ್ಯಗಳನ್ನು, ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿ ವಿಂಗಡಿಸಿ. Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕಂಬೀಪುರ ಗ್ರಾಮದ ಸರ್ವೆ ನಂ. 253/2 ರಲ್ಲಿನ 1ಎಕರೆ-38ಗುಂಟೆ ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯನ್ನು ಅರ್ಜಿದಾರರಾದ ಶ್ರೀ.ಪ್ರಸನ್ನಕುಮಾರ್ ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

| | |
|---|---|
| 13 | ವಸತಿ ವಿನ್ಯಾಸದಲ್ಲಿ ಎಲ್ಲಾ ರಸ್ತೆಗಳನ್ನು IRC Specification ಪ್ರಕಾರ ಅಭಿವೃದ್ಧಿ ಪಡಿಸತಕ್ಕದ್ದು, ಅದಕ್ಕೂ ಮುಂಚೆ ಅಂದಾಜುಪಟ್ಟಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿಯಂತರ ವಿಭಾಗದಿಂದ ಅನುಮೋದಿಸಿಕೊಳ್ಳತಕ್ಕದ್ದು, ರಸ್ತೆ ಅಭಿವೃದ್ಧಿ ಪಡಿಸುವ ಸಮಯದಲ್ಲಿ ಅಭಿಯಂತರ ವಿಭಾಗದಿಂದ ಸ್ಥಳ ಪರಿಶೀಲನೆಗಾಗಿ ಮತ್ತು ಕಾಮಗಾರಿ ಪರಿಶೀಲನೆಗೆ ಅನುವುಮಾಡಿಕೊಡತಕ್ಕದ್ದು. |
| 14 | ವಸತಿ ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೂ ಸೋಲಾರ್ ಲೈಟಿಂಗ್ ಮತ್ತು ಸೋಲಾರ್ ವಾಟರ್ ಹೀಟಿಂಗ್ ವ್ಯವಸ್ಥೆಯನ್ನು ಅಳವಡಿಸಕ್ಕದ್ದು. |
| 15 | ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17(2-ಬಿ) ರನ್ವಯ ವಿನ್ಯಾಸವನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿ ಪಡಿಸಿ ಸಕ್ಷಮ ಪ್ರಾಧಿಕಾರಗಳಿಂದ ನಿರಾಕ್ಷೇಪಣಾ ಪತ್ರಗಳೊಂದಿಗೆ ಪ್ರಸ್ತಾವನೆ ಸಲ್ಲಿಸಿದ ನಂತರ ಅಂತಿಮ ವಿನ್ಯಾಸವನ್ನು ಮತ್ತು ನಿವೇಶನಗಳನ್ನು ಅಂತಿಮವಾಗಿ ಬಿಡುಗಡೆಗೊಳಿಸಲಾಗುವುದು. |
| 16 | ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡುವ ಪೂರ್ವಭಾವಿಯಾಗಿ ಸಂಬಂಧ ಪಟ್ಟ ಸಕ್ಷಮ ಪ್ರಾಧಿಕಾರದಿಂದ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯತಕ್ಕದ್ದು. |
| 17 | ಸಿವಿಲ್ ಕಾಮಗಾರಿ ಕೆಲಸಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ಅರ್ಜಿದಾರರೇ ಕಾರ್ಯಗತ ಮಾಡತಕ್ಕದ್ದು. |
| 18 | ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ/ ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಉಳಿದ ಬಳಕೆಗಾಗಿ ಬಳಸತಕ್ಕದು. |
| 19 | ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೆ ಗೃಹ ಬಳಕೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗಾಗಿ ಪ್ರತ್ಯೇಕ ಕೊಳವೆಗಳನ್ನು ಒದಗಿಸತಕ್ಕದ್ದು. ಕುಡಿಯುವ ನೀರು ಮತ್ತು ಇತರೆ ಉಪಯೋಗಗಳಿಗೆ Dual Piping System ಅಳವಡಿಸುವುದು. |
| 20 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು. ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 21 | BESCOM ನಿರ್ದೇಶನದಂತೆ ಬಡಾವಣೆಯಲ್ಲಿ ವಿದ್ಯುಚ್ಛಕ್ತಿ ಅಳವಡಿಸಲು ಕ್ರಮ ಕೈಗೊಳ್ಳತಕ್ಕದ್ದು. |
| 22 | ಸದರಿ ವಸತಿ ವಿನ್ಯಾಸದಲ್ಲಿ ಪ್ರಾಧಿಕಾರದ ದಿನಾಂಕ.08/11/2010 ರ ಸುತ್ತೋಲೆಯಂತೆ ಒಟ್ಟು ವಸತಿ ನಿವೇಸನಗಳ ಶೇ.10 ರಷ್ಟು ವಸತಿ ನಿವೇಶನಗಳನ್ನು (EWS) ಆರ್ಥಿಕ ಹಿಂದುಳಿದ ವರ್ಗದವರಿಗಾಗಿ ಮತ್ತು (LIG) ಕಡಿಮೆ ಆದಾಯ ವರ್ಗದವರಿಗಾಗಿ ಕಾಯ್ದಿರಿಸಕ್ಕದ್ದು, ಆ ವರ್ಗದವರಿಗೆ ನಿವೇಶನವನ್ನು ಹಂಚಿಕೆ ಮಾಡತಕ್ಕದ್ದು. (EWS) ಆರ್ಥಿಕ ದುರ್ಭಲ ವರ್ಗದವರಿಗಾಗಿ ಕಾಯ್ದಿರಿಸಿದ ನಿವೇಶನಗಳನ್ನು ಒಂದುಗೂಡಿಸಿ ದೊಡ್ಡ ಅಳತೆಯ ನಿವೇಶನವನ್ನಾಗಿ ಸಮಾಮೇಲನಾ ಮಾಡಿದ್ದಲ್ಲಿ ಮೂಲ ಆಶಯ ವಿಫಲವಾಗುವುದರಿಂದ (EWS) ಆರ್ಥಿಕವಾಗಿ ಹಿಂದುಳಿದ ವರ್ಗದವರಿಗಾಗಿ ಕಾಯ್ದಿರಿಸಿದ ವಸತಿ ನಿವೇಶನಗಳನ್ನು ಸಮಾಮೇಲನಾ ಮಾಡತಕ್ಕದ್ದಲ್ಲ. |

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕಂಬೀಪುರ ಗ್ರಾಮದ ಸರ್ವೆ ನಂ. 253/2 ರಲ್ಲಿನ 1ಎಕರೆ-38ಗುಂಟೆ ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯನ್ನು ಅರ್ಜಿದಾರರಾದ ಶ್ರೀ.ಪ್ರಸನ್ನಕುಮಾರ್ ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

| | |
|---|---|
| 23 | ಸಿವಿಲ್ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ ಅಭಿಯಂತರ ವಿಭಾಗದಿಂದ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, BESCOM ಇಲಾಖೆಗಳಿಂದ ಹಾಗೂ ಅಗತ್ಯಕ್ಕನುಗುಣವಾಗಿ KSPCB ರವರಿಂದ ಹಾಗೂ ಇತರೆ ಸಂಬಂಧಿತ ಇಲಾಖೆಗಳಿಂದ ಕಾಮಗಾರಿ ಮುಕ್ತಾಯ ಪ್ರಮಾಣ ಪತ್ರಗಳನ್ನು ಪಡೆದು ನಿವೇಶನಗಳ ಬಿಡುಗಡೆ ಮತ್ತು ವಿನ್ಯಾಸಕ್ಕೆ ಅಂತಿಮ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸತಕ್ಕದ್ದು. |
| 24 | ಬಡಾವಣೆ ನಕ್ಷೆಯಲ್ಲಿ Transformer Yard, RWH, STP ಗಳಿಗಾಗಿ ಸೂಕ್ತ ಜಾಗಗಳನ್ನು ಕಾಯ್ದಿರಿಸಿದ್ದು ಇವುಗಳನ್ನು ಬದಲಾಯಿಸುವಂತಿಲ್ಲ ಹಾಗೂ ಸಂಬಂಧಪಟ್ಟ ಸಂಸ್ಥೆಯ ಅಭಿಪ್ರಾಯದಂತೆ ಅಭಿವೃದ್ಧಿಪಡಿಸುವುದು. |
| 25 | ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಈ ಮೇಲ್ಕಂಡ ಷರತ್ತುಗಳಿಗೊಳಪಡಿಸಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕಂಬೀಪುರ ಗ್ರಾಮದ ಸರ್ವೆ ನಂ. 253/2 ರಲ್ಲಿನ 1ಎಕರೆ-38ಗುಂಟೆ ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 [2-A] ರಡಿಯಲ್ಲಿ Demarcation & Development ಉದ್ದೇಶಕ್ಕಾಗಿ ಮಾತ್ರ ಅನುಮೋದನೆ ನೀಡಲಾಗಿದೆ.

ಆಯುಕ್ತರು,

ಬೆಂಅಪ್ರಾ, ಬೆಂಗಳೂರು

ಇವರಿಗೆ,

ಶ್ರೀ ಪ್ರಸನ್ನಕುಮಾರ್ ಕೆ.

# 1405, "ಅಪ್ರಮೇಯ" 8 ನೇ ಅಡ್ಡ ರಸ್ತೆ,

8 ನೇ ಮುಖ್ಯ ರಸ್ತೆ, ಬಿ.ಇ.ಎಂ.ಎಲ್.5 ನೇ ಹಂತ,

ನ್ಯೂ ಹಾರಿಸನ್ ಸ್ಕೂಲ್ ಎದುರು,

ರಾಜರಾಜೇಶ್ವರಿ ನಗರ,

ಬೆಂಗಳೂರು 560 098